ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 27/8/20

# ಪೊಲೀಸ್ ಆಯುಕ್ತರ ಜತೆ ಶಾಸಕ ಅಖಂಡ ಶ್ರೀನಿವಾಸ್ ಚರ್ಚೆ

**ವಿಕ ಸುದ್ದಿಲೋಕ** ಬೆಂಗಳೂರು

ಡಿ.ಜೆ.ಹಳ್ಳಿ ಗಲಭೆ ಹಾಗೂ ತಮ್ಮ ನಿವಾಸಕ್ಕೆ ಬೆಂಕಿ ಹಚ್ಚಿದ ಪ್ರಕರಣಗಳ ಸಂಬಂಧ ಬುಧವಾರ ಬೆಳಗ್ಗೆ ನಗರ ಪೊಲೀಸ್ ಕಮಿಷನರ್ ಕಚೇರಿಯಲ್ಲಿ ಶಾಸಕ ಅಖಂಡ ಶ್ರೀನಿವಾಸಮೂರ್ತಿ ಒಂದು ಗಂಟೆಗೂ ಅಧಿಕ ಹೊತ್ತು ಚರ್ಚೆ ನಡೆಸಿದರು.

**ಡಿಜೆಹಳ್ಳಿ ಗಲಭೆ ಪ್ರಕರಣ**

ತನಿಖೆ ತೀವ್ರವಾಗಿ ನಡೆಯುತ್ತಿದ್ದು ಮಾಜಿ ಮೇಯರ್ ಸಂಪತ್ ರಾಜ್ ಅವರ ಆಪ್ತ ಸಹಾಯಕ ಮತ್ತು ಸಂಬಂಧಿ ಅರುಣ್ ರಾಜ್‌ನನ್ನು ಬಂಧಿಸಿರುವ ಬೆನ್ನಲ್ಲೇ ಶಾಸಕರು ಮತ್ತು ಕಮಿಷನರ್ ನಡುವಿನ ಚರ್ಚೆ ಮಹತ್ವ ಪಡೆದುಕೊಂಡಿದೆ.

ಗಲಭೆ ಸಂಬಂಧ ಇನ್ನೂ ಹಲವರ ಹೆಸರುಗಳು ಕೇಳಿ ಬಂದಿದ್ದು ಅವರ ಜತೆ ಏನಾದರೂ ಭಿನ್ನಾಭಿಪ್ರಾಯ ಅಥವಾ ವಿವಾದಗಳು ಇದ್ದವೇ ಎಂದು ಶಾಸಕರ ಜತೆ ಕಮಿಷನರ್ ಚರ್ಚಿಸಿದ್ದಾರೆ ಎನ್ನಲಾಗಿದೆ.

ಚರ್ಚೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಶ್ರೀನಿವಾಸಮೂರ್ತಿ,'' ದೂರುದಾರನಾಗಿ, ಕ್ಷೇತ್ರದ ಶಾಸಕನಾಗಿ ಪ್ರಕರಣದ ತನಿಖೆ ಬಗ್ಗೆ ಕಮಿಷನರ್ ಜತೆ ಚರ್ಚಿಸಿ ಮಾಹಿತಿ ಪಡೆದಿದ್ದೇನೆ. ತನಿಖೆ ನಡೆದು ವರದಿ ಬಂದ ಬಳಿಕ ತಪ್ಪಿತಸ್ಥರು ಯಾರು ಎಂಬುದು ತಿಳಿಯಲಿದೆ. ಗಲಭೆಯ ಹಿಂದಿನ ಷಡ್ಯಂತ್ರ ಖಂಡಿತಾ ಹೊರಗೆ ಬರುತ್ತದೆ'' ಎನ್ನುವ ಭರವಸೆ ವ್ಯಕ್ತಪಡಿಸಿದರು.

**ಮತ್ತೆ 9 ಮಂದಿ ಬಂಧನ:** ಬುಧವಾರ ಮತ್ತೆ 9 ಮಂದಿಯನ್ನು ಬಂಧಿಸಲಾಗಿದೆ. ಡಿಜೆಹಳ್ಳಿ ನಿವಾಸಿಗಳಾದ 5 ಮಂದಿ ಹಾಗೂ ಕೆ.ಜಿ.ಹಳ್ಳಿ ಠಾಣೆ ವ್ಯಾಪ್ತಿಯಲ್ಲಿ ನೆಲೆಸಿರುವ 4 ಮಂದಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಈ ಆರೋಪಿಗಳು ನವೀನ್ ಮನೆ ಧ್ವಂಸಗೊಳಿಸಿ, ಡಿಜೆಹಳ್ಳಿ ಠಾಣೆಗೆ ಬೆಂಕಿ ಹಚ್ಚುವ ಕೃತ್ಯದಲ್ಲಿ ಭಾಗಿಯಾಗಿದ್ದರು ಎನ್ನುವ ಸುಳಿವು ಸಿಸಿ ಕ್ಯಾಮೆರಾ ಹಾಗೂ ಮೊಬೈಲ್ ಸೆರೆ ಹಿಡಿದ ವಿಡಿಯೋಗಳಲ್ಲಿ ದಾಖಲಾಗಿತ್ತು. ಈ ಸುಳಿವಿನ ಮೇಲೆ ಬಂಧಿಸಲಾಗಿದ್ದು ಒಟ್ಟು ಬಂಧಿತರ ಸಂಖ್ಯೆ 400 ತಲುಪಿದೆ.